ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/130/ಚುನಾವಣೆ/2018-19

ದಿನಾಂಕ: 27.08.2019.

## ಸುತ್ತೋಲೆ

ವಿಷಯ: 2019-20ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಎಲ್ಲಾ ಪದವಿ ಕಾಲೇಜುಗಳಲ್ಲಿ ಈಗಾಗಲೇ ಪ್ರಾರಂಭಿಸಲಾಗಿರುವ ಇಎಲ್‌ಸಿ ಸಂಚಾಲಕರುಗಳು ಹಮ್ಮಿಕೊಳ್ಳಬೇಕಾಗಿರುವ ಕಾರ್ಯಕ್ರಮಗಳ ಕುರಿತು.

ಉಲ್ಲೇಖ: 1. ದಿನಾಂಕ:07.03.2019ರ ಸಂಖ್ಯೆ: ಕಾಶಿಇ/ಶೈವಿ/130/ಚು.ಪ್ರ/2018-19 ರ ಈ ಕಛೇರಿ ಸುತ್ತೋಲೆ.

2. ದಿನಾಂಕ:26.07.2019 ರಂದು ಸಿಇಓ ರವರ ಕಛೇರಿಯಲ್ಲಿ ನಡೆದ ವಿಸಿ ನಡಾವಳಿ.

* * * * * *

ಭಾರತದ ಚುನಾವಣಾ ಆಯೋಗವು ಭಾವೀ ಮತದಾರರಾದ ಇಂದಿನ ವಿದ್ಯಾರ್ಥಿಗಳಲ್ಲಿ ಚುನಾವಣಾ ಪ್ರಕ್ರಿಯೆಯ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ "ಚುನಾವಣಾ ಸಾಕ್ಷರತಾ ಕ್ಲಬ್" ನ್ನು ಉಲ್ಲೇಖ (1)ರ ಈ ಕಛೇರಿ ಸುತ್ತೋಲೆಯಲ್ಲಿ ಸ್ಥಾಪಿಸಲು ಸೂಚಿಸಲಾಗಿದ್ದು, ಅದರಂತೆ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ "ಚುನಾವಣಾ ಸಾಕ್ಷರತಾ ಕ್ಲಬ್" ಸ್ಥಾಪಿಸುವುದು ಕಡ್ಡಾಯವಾಗಿರುತ್ತದೆ. ತತ್ಸಂಬಂಧವಾಗಿ ಉಲ್ಲೇಖಿತ (2)ರ ನಡಾವಳಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸುತ್ತಾ, ಸದರಿ ನಡಾವಳಿಯಲ್ಲಿನ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಂಡು ನಂತರ ವರದಿ ಮತ್ತು ಅತ್ಯುತ್ತಮ ಫೋಟೋ (High resolution Photos, but not what's app photos)ಗಳೊಂದಿಗೆ consveep.@gmail.com ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಇಎಲ್‌ಸಿ ಸಂಚಾಲಕರುಗಳಿಗೆ - ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಜಿಲ್ಲೆಗಳ ಜಿಲ್ಲಾ ಸರ್ಕಾರಿ ಪ್ರಥಮ ದರ್ಜೆ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಮಾಹಿತಿ ಹಾಗೂ ಜಿಲ್ಲೆಯ ಎಲ್ಲಾ ಪ್ರಾಂಶುಪಾಲರು ಮತ್ತು ಇಎಲ್‌ಸಿ ಸಂಚಾಲಕರೊಂದಿಗೆ ಸಮನ್ವಯ ಸಾಧಿಸಿ ಕಾರ್ಯಕ್ರಮದ ಯಶಸ್ವಿ ಅನುಷ್ಠಾನಕ್ಕೆ ಸಹಕರಿಸುವುದು.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಉಪ ಮುಖ್ಯ ಚುನಾವಣಾಧಿಕಾರಿಗಳು, ಮುಖ್ಯಚುನಾವಣಾಧಿಕಾರಿಯವರ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.
2. ಕಛೇರಿ ಪ್ರತಿ.